# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಅಭಿಯಂತರರ ಕಛೇರಿ, ವಾರ್ಡ್‌ಸಂಖ್ಯೆ 164, ವಿದ್ಯಾಪೀಠ ವಾರ್ಡ್, ವಿದ್ಯಾಪೀಠ ಸರ್ಕಲ್, ಬೆಂಗಳೂರು,

ಸಂಖ್ಯೆ:ಸ.ಅ/ವಾ-164/ಪಿಆರ್/2020-21

ದಿನಾಂಕ 5/12/2020

## ವಾರ್ಡ್ ಸಮಿತಿ ಸಭೆಯ ನಡಾವಳಿಗಳು

**ವಿಷಯ :** ಮಾನ್ಯ ಆಯುಕ್ತರು - ಬಿ.ಬಿ.ಎಂ.ಪಿ.ರವರ ಕಛೇರಿ ಆದೇಶದ ಸಂಖ್ಯೆ ಬಿ12(5)/ಪಿಆರ್/ 35/2020-21, ದಿನಾಂಕ: 21.09.2020ರ ಆದೇಶದಂತೆ ದಿನಾಂಕ 5-12-2020ರಂದು ವಾರ್ಡ್ ಸಂಖ್ಯೆ 164, ವಿದ್ಯಾಪೀಠ ವಾರ್ಡ್‌ನಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

*****

**ಸ್ಥಳ -** ವಾರ್ಡ್ 164ರ ಶ್ರೀಕಂಠೇಶ್ವರ ಪಾರ್ಕ್ ಹತ್ತಿರ ಇರುವ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ರವರ ಕಛೇರಿಯಲ್ಲಿ
**ಸಮಯ -** ಮಧ್ಯಾಹ್ನ 4.00 ಗಂಟೆಗೆ

### ಹಾಜರಿದ್ದ ಸದಸ್ಯರು ಮತ್ತು ಅಧಿಕಾರಿಗಳ ವಿವರ

| ಕ್ರ.ಸಂ. | ಹೆಸರು | ಪದನಾಮ |
|---|---|---|
| 1. | ಶ್ರೀ ವಿಜಯಕುಮಾರ್ ಆರ್. | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು, ಉಪನಿಯಂತ್ರಕರು (ಹಣಕಾಸು)(ಕೇಂದ್ರ) |
| 2. | ಶ್ರೀ ಎಸ್. ನಂದೀಶ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಮತ್ತು ಸಂಚಾಲಕರು, ವಾರ್ಡ್-164, ವಿದ್ಯಾಪೀಠ |
| 3. | ಶ್ರೀ ಕೆ. ಸುನೀಲ್ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 164 |
| 4. | ಶ್ರೀಮತಿ ಲಕ್ಷ್ಮಿ ಎಸ್.ಹೆಚ್. | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ. 164 |
| 5. | ಶ್ರೀ ಧವಳೇಶ್ | ಸಹಾಯಕ ಅಭಿಯಂತರರು (ಬೆಸ್ಕಾಂ) |
| 6. | ಶ್ರೀ ಪಿ. ಜ್ಞಾನೇಶ್ವರ್ | ಸಹಾಯಕ ಅಭಿಯಂತರರು, ವಿದ್ಯುತ್ ವಿಭಾಗ, ಬಿಬಿಎಂಪಿ |
| 7. | ಶ್ರೀ ವಿಷಕಂಠಯ್ಯ | ಕೆಲಸ ಪರಿವೀಕ್ಷಕರು, ವಾರ್ಡ್ ನಂ. 164 |
| 8. | ಜಿ. ನರಸಿಂಹರೆಡ್ಡಿ | ವಾರ್ಡ್ ಹಿರಿಯ ನಾಗರಿಕರು ಮತ್ತು ನಿವೃತ್ತ ಸೈನಿಕರು |
| 9. | ಶ್ರೀ ಸಾಯಿಕುಮಾರ್ | ವಾರ್ಡ್ ಹಿರಿಯ ನಾಗರಿಕರು |
| 10. | ಶ್ರೀ ಸ್ವಾಮಿ ಗೌಡ | ವಾರ್ಡ್ ನಾಗರಿಕರು |

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳಾದ ಶ್ರೀ ವಿಜಯಕುಮಾರ್‌ರವರು ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಿದರು.

1) ಪ್ರಥಮತಃ, ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ಕೆ. ಸುನಿಲ್‌ರವರು ಮಾತನಾಡುತ್ತಾ, ಆರೋಗ್ಯ ಇಲಾಖೆಯಿಂದ ನಡೆಯುತ್ತಿರುವ ಕೋವಿಡ್-19 ಕಾರ್ಯಕ್ರಮಕ್ಕೆ ಎಲ್ಲ ರೀತಿಯ ಜಾಗ್ರತೆ ಮತ್ತು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ವಾರ್ಡ್ 164, ವಿದ್ಯಾಪೀಠ ವ್ಯಾಪ್ತಿಯಲ್ಲಿ ಮೊಬೈಲ್ ಪಾಯಿಂಟ್, ಪರೀಕ್ಷಾಕೇಂದ್ರಗಳಲ್ಲಿ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಕೋವಿಡ್ ಟೆಸ್ಟ್‌ಗಳನ್ನು ನಡೆಸಲಾಗುತ್ತಿದ್ದು, ಪ್ರತಿದಿನವೂ ಸರಿಸುಮಾರು 150 ರಿಂದ 250 ಟೆಸ್ಟ್‌ಗಳನ್ನು ಉಚಿತವಾಗಿ ಪಾಲಿಕೆಯ ವತಿಯಿಂದ ನಡೆಸಲಾಗುತ್ತಿದೆ ಎಂದು ಸಭೆಗೆ ತಿಳಿಸಿರುತ್ತಾರೆ.

2) ವಾರ್ಡ್‌ನಲ್ಲಿ ಒಟ್ಟು 14,128 ಆರ್‌ಟಿಪಿಸಿಆರ್ ಟೆಸ್ಟ್‌ಗಳನ್ನು ಮಾಡಲಾಗಿದ್ದು, ಇದರಲ್ಲಿ ಚಾಲ್ತಿಯಲ್ಲಿರುವ ಪ್ರಕರಣಗಳು 990 ಹಾಗೂ ಕಾಲಕಾಲಕ್ಕೆ ಕೋವಿಡ್-19 ನಿಯಂತ್ರಣಕ್ಕೆ ಬರುತ್ತಿರುವುದರಿಂದ ಅತಿ ಹೆಚ್ಚಿನ ನಿಗಾ ವಹಿಸಲಾಗಿರುತ್ತದೆ ಎಂದು ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಗೆ ತಿಳಿಸಿರುತ್ತಾರೆ.

3) ಘನತ್ಯಾಜ್ಯ ವಿಲೇವಾರಿಗೆ ಸಂಬಂಧಿಸಿದಂತೆ ಹಲವಾರು ತುರ್ತುಕ್ರಮಗಳನ್ನು ಅಳವಡಿಸಿಕೊಂಡು 23 ಆಟೋ ಟಿಪ್ಪರ್‌ಗಳು, 80 ಜನ ಪೌರಕಾರ್ಮಿಕರು, 2 ಲಿಫ್ಟಿಂಗ್ ಕಾಂಪಾಕ್ಟರ್‌ಗಳ ಮೂಲಕ ಮನೆಮನೆಯ ಒಣತ್ಯಾಜ್ಯ ಹಾಗೂ ಘನತ್ಯಾಜ್ಯವನ್ನು ಪ್ರತಿ ದಿನವೂ ಬೆಳಿಗ್ಗೆ 6.30 ರಿಂದ 10.30ರ ವರೆಗೆ ಸಂಗ್ರಹಿಸಲಾಗುತ್ತಿದೆಯೆಂದು ಹಿರಿಯ ಆರೋಗ್ಯ ಪರಿವೀಕ್ಷಕರು ಸಭೆಗೆ ತಿಳಿಸಿರುತ್ತಾರೆ. ಹಸಿತ್ಯಾಜ್ಯ ಮತ್ತು ಒಣತ್ಯಾಜ್ಯಗಳನ್ನು ಬೇರ್ಪಡಿಸಿ ಆಟೋಗಳ ಲಭ್ಯತೆಯ ಮೇರೆಗೆ ಪ್ರತಿದಿನವೂ ವಿಲೇವಾರಿ ಮಾಡಲಾಗುತ್ತಿದೆ. ಈ ಸಂಬಂಧ ವಾರ್ಡಿನಲ್ಲಿರುವ ಬ್ಲಾಕ್‌ಸ್ಪಾಟ್‌ಗಳನ್ನು ತುರ್ತಾಗಿ ತೆರವುಗೊಳಿಸಲು ಸಂಬಂಧಪಟ್ಟ ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.

4) ವಾರ್ಡ್ ವ್ಯಾಪ್ತಿಯ ಎಸ್-15ನೇ ಉಪವಿಭಾಗದ ಬೆಸ್ಕಾಂರವರು ರಸ್ತೆ ಅಗೆತ ಮಾಡಿ ಅಂಡರ್‌ಗ್ರೌಂಡ ಕೇಬಲ್ ಅಳವಡಿಸಿದ್ದು, ಈ ಕಾಮಗಾರಿಯು ಇನ್ನು 2-3 ವಾರಗಳಲ್ಲಿ ಮುಕ್ತಾಯಗೊಳ್ಳುವುದಾಗಿ ಬೆಸ್ಕಾಂ ಇಂಜಿನಿಯರ್‌ರವರು ಸಭೆಗೆ ತಿಳಿಸಿರುತ್ತಾರೆ. ಕಳೆದ ಸಭೆಯಲ್ಲಿ ಚರ್ಚಿಸಿದಂತೆ ಬೆಸ್ಕಾಂರವರ ಕೇಬಲ್ ಅಳವಡಿಕೆಯ ಎಲ್ಲಾ ಕಾಮಗಾರಿಗಳನ್ನೂ ಆದಷ್ಟೂ ಬೇಗ ಪೂರ್ಣಗೊಳಿಸಿ, ಅಗೆದಿರುವ ರಸ್ತೆಗಳನ್ನು ಸರಿಪಡಿಸಲು ಹಾಗೂ ಹೆಚ್ಚುವರಿಯಾಗಿ ಸ್ಥಳದಲ್ಲೇ ಬಿಟ್ಟಿರುವ ಕೇಬಲ್‌ಗಳನ್ನು ತೆರಳುಗೊಳಿಸಲು ಬೆಸ್ಕಾಂ ಇಂಜಿನಿಯರ್‌ರವರಿಗೆ ನೋಡಲ್ ಅಧಿಕಾರಿಗಳು ಸೂಚಿಸಿರುತ್ತಾರೆ.

5) ಪಾಲಿಕೆಯ ವಿದ್ಯುತ್ ವಿಭಾಗದ ಇಂಜಿನಿಯರ್‌ರವರು ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ಹೊಸ ಬಲ್ಬ್‌ಗಳ ಅಳವಡಿಕೆ ಕಾರ್ಯಕ್ರಮವನ್ನು ಹಮ್ಮಿಕೊಂಡಿರವುದಿಲ್ಲವೆಂದು, ಯಾವುದೇ ಬೀದಿ ದೀಪ ನಿರ್ವಹಣೆಯಲ್ಲಿ ಕುಂದುಕೊರತೆ ಮತ್ತು ದೂರುಗಳು ವರದಿಯಾಗಿರುವುದಿಲ್ಲವೆಂದು ಮತ್ತು ಹಾಲಿ ಬೀದಿದೀಪ ನಿರ್ವಹಣೆಯ ಗುತ್ತಿಗೆದಾರರು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದ್ದಾರೆಂದು ಸಭೆಗೆ ತಿಳಿಸಿರುತ್ತಾರೆ.

6) ವಾರ್ಡ್ ವ್ಯಾಪ್ತಿಯಲ್ಲಿ ಮಳೆಹಾನಿಯಿಂದ ಉಂಟಾದ ರಸ್ತೆ ಗುಂಡಿಗಳನ್ನು ಮುಚ್ಚಲು ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು ಮಳೆಗಾಲದಲ್ಲಿ ಮರಗಳು ಬಿದ್ದ ತಕ್ಷಣ ತೆರವುಗೊಳಿಸಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ವಾರ್ಡ್ ಇಂಜಿನಿಯರ್‌ರವರು ಸಭೆಗೆ ತಿಳಿಸಿರುತ್ತಾರೆ.

7) ಮುಂದುವರೆದು, ಮಳೆಹಾನಿಯಿಂದ ಹದಗೆಟ್ಟ, ವಾರ್ಡ್ ವ್ಯಾಪ್ತಿಯಲ್ಲಿರುವ ರಸ್ತೆಗುಂಡಿಗಳ ವಿವರಗಳನ್ನು ಸಭೆಯಲ್ಲಿ ಚರ್ಚಿಸುತ್ತಾ, 14 ಪ್ರಮುಖ ರಸ್ತೆಗಳಲ್ಲಿ ರಸ್ತೆಗುಂಡಿಗಳನ್ನು ಮುಚ್ಚುವ ಕಾಮಗಾರಿಯನ್ನು ಪೂರ್ಣಗೊಳಿಸಲಾಗಿದ್ದು , ಬನಶಂಕರಿ 1ನೇ ಹಂತದ 7ನೇ ಅಡ್ಡರಸ್ತೆ, 7 ಮತ್ತು 8ನೇ ಮುಖ್ಯರಸ್ತೆ, 5ನೇ ಅಡ್ಡರಸ್ತೆ, ಅಶೋಕನಗರದ 2, 6, 7, 8ನೇ ಅಡ್ಡರಸ್ತೆಗಳಲ್ಲಿ ಗುಂಡಿಗಳನ್ನು ಮುಚ್ಚಲಾಗಿದೆ ಎಂದು ಸಭೆಗೆ ತಿಳಿಸಿರುತ್ತಾರೆ. ಮಳೆಗಾಲದಲ್ಲಿ ವಾರ್ಡ್‌ವ್ಯಾಪ್ತಿಯಲ್ಲಿ ರಸ್ತೆಗಳು ಹದಗೆಟ್ಟು, ಗುಂಡಿಗಳು ಬಿದ್ದು ಸಾರ್ವಜನಿಕರಿಗೆ, ವಾಹನಸಂಚಾರರಿಗೆ ತೊಂದರೆಯಾಗುತ್ತಿದ್ದುದನ್ನು ನೋಡಲ್ ಅಧಿಕಾರಿಗಳು ಪ್ರಸ್ತಾಪಿಸಿ, ಎಲ್ಲಾ ರಸ್ತೆಗಳಲ್ಲಿ ರಸ್ತೆಗುಂಡಿಗಳನ್ನು ಪರಿವೀಕ್ಷಿಸಿ ಗುರುತಿಸಿ, ತುರ್ತಾಗಿ ಗುಂಡಿಗಳನ್ನು ಮುಚ್ಚುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ವಾರ್ಡ್ 164ರ ಇಂಜಿನಿಯರ್‌ರವರಿಗೆ ನೋಡಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

8) ನಂತರ ನೋಡಲ್ ಅಧಿಕಾರಿಗಳು ಮಾತನಾಡಿ, ಮಾನ್ಯ ಆಯುಕ್ತರು ಸೂಚನೆ ನೀಡಿದಂತೆ, "BBMP MY CITY MY BUDGET" 2021-22ರ ಸಾಲಿನಲ್ಲಿ ಜನಾಗ್ರಹದವರ ಸಹಯೋಗದೊಂದಿಗೆ ಪಾಲಿಕೆಯಲ್ಲಿ ಚಾಲ್ತಿಯಲ್ಲಿರುವ "MY CITY MY BUDGET" ಯೋಜನೆಯ ಅಡಿಯಲ್ಲಿ ಈ ಬಾರಿ ಎರಡು ವಿಷಯಗಳಾದ, PUBLIC TOLET & FOOT PATH (ಸಾರ್ವಜನಿಕ ಶೌಚಾಲಯ ಮತ್ತು ಪಾದಚಾರಿ ಮಾರ್ಗ)ಗಳ ಅಭಿವೃದ್ಧಿ ವಿಚಾರವಾಗಿ ವಾರ್ಡ್‌ಗಳ ಸಾರ್ವಜನಿಕರಿಂದ ಮತ್ತು ರೆಸಿಡೆಂಟ್ ವೆಲ್‌ಫೇರ್ ಅಸೋಸಿಯೇಷನ್ ಗಳಿಂದ ಸಲಹೆ ಮತ್ತು ಸೂಚನೆಗಳನ್ನು ತಿಳಿಸಲು ಕೋರಿರುವುದನ್ನು ಸಭೆಗೆ ತಿಳಿಸಿದರು. ಮುಂದುವರೆದು, ಈ ಬಗ್ಗೆ ಮಾನ್ಯ ಆಯುಕ್ತರು, ವಿಶೇಷ ಆಯುಕ್ತರು ಮತ್ತು ವಿಶೇಷ ಆಯುಕ್ತರು (ಕಾಮಗಾರಿ)ರವರುಗಳು ಮುಂದಿನ ವಾರ ರೆಸಿಡೆಂಟ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಜೊತೆ ವೀಡಿಯೋ ಸಂವಾದವನ್ನು ಏರ್ಪಡಿಸಲಾಗಿದ್ದು ಮಾನ್ಯ ಆಯುಕ್ತರ ಸಂದೇಶವನ್ನು ಸಭೆಗೆ ಹಾಜರಾದ ತಮ್ಮೆಲ್ಲರಿಗೂ ಕಳುಹಿಸಲಾಗಿದ್ದು, ಅದರಂತೆ ತಾವುಗಳು ತಮ್ಮ ಸಲಹೆ-ಸೂಚನೆಗಳೊಂದಿಗೆ ವೀಡಿಯೋ ಸಂವಾದದಲ್ಲಿ ಪಾಲ್ಗೊಳ್ಳಲು ಸಭೆಯಲ್ಲಿ ಹಾಜರಿದ್ದ ಎಲ್ಲ ಸದಸ್ಯರುಗಳನ್ನು ನೋಡಲ್ ಅಧಿಕಾರಿಯವರು ಕೋರಿದರು. ಇದಕ್ಕೆ ಸಭೆಯಲ್ಲಿ ಹಾಜರಿದ್ದ ಎಲ್ಲರೂ ಸಹಮತ ವ್ಯಕ್ತಪಡಿಸಿ ವೀಡಿಯೋ ಸಂವಾದದಲ್ಲಿ ಭಾಗವಹಿಸುವುದಾಗಿ ತಿಳಿಸಿರುತ್ತಾರೆ.

9) ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಹೆಚ್ಚಾಗದಂತೆ ಜಾಗ್ರತೆ ವಹಿಸಲು ಮುಂಜಾಗ್ರತಾ ಕ್ರಮವಾಗಿ ಮಾರ್ಷಲ್‌ಗಳಿಗೆ ರಾತ್ರಿ 7.00 ರಿಂದ 9.30ವರೆಗೆ ವಾರ್ಡ್‌ನಲ್ಲಿ ಸಂಚರಿಸಿ ಸಾಮಾಜಿಕ ಅಂತರ ಕಾಪಾಡಿಕೊಳ್ಳಲು ಹಾಗೂ ಮಾಸ್ಕ್ ಧರಿಸುವುದರ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಹಾಗೂ ಮಾಸ್ಕ್ ಧರಿಸದಿರುವವರಿಗೆ ದಂಡ ವಿಧಿಸಲು ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.

10) ವಾರ್ಡ್‌ನಲ್ಲಿ ಕೋವಿಡ್-19ರ ಪ್ರಕರಣಗಳು ಹೆಚ್ಚಾಗದಂತೆ ಜಾಗ್ರತೆ ವಹಿಸಲು ಆರೋಗ್ಯ ಇಲಾಖೆಯವರಿಗೆ ಸಮರ್ಪಕವಾಗಿ ಔಷಧಿ ಸಿಂಪಡಣೆ ಕಾರ್ಯಗಳನ್ನು ಕೈಗೊಳ್ಳಲು, ವಾರ್ಡ್ ವ್ಯಾಪ್ತಿಯಲ್ಲಿ ಜನಸಂದಣಿ ಪ್ರದೇಶಗಳಲ್ಲಿ ಸಾರ್ವಜನಿಕ ಸಾಮಾಜಿಕ ಅಂತರ ಕಾಪಾಡಿಕೊಳ್ಳುವುದು ಹಾಗೂ ಮಾಸ್ಕ್ ಧರಿಸುವುದರ ಬಗ್ಗೆ ಅರಿವು ಮೂಡಿಸಲು ಸಹ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಸೂಚಿಸಲಾಗಿರುತ್ತದೆ.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಕಾರ್ಯದರ್ಶಿಗಳು**
**ಸಹಾಯಕ ಅಭಿಯಂತರರು**
ವಾರ್ಡ್-164, ವಿದ್ಯಾಪೀಠ

**ಅಧ್ಯಕ್ಷರು ಹಾಗೂ**
**ನೋಡಲ್ ಅಧಿಕಾರಿಗಳು**
ವಾರ್ಡ್-164, ವಿದ್ಯಾಪೀಠ

**ಪ್ರತಿಯನ್ನು:-**

1. ಮಾನ್ಯ ಆಯುಕ್ತರು, ಬೃ.ಬೆ.ಮ.ಪಾಲಿಕೆ, ಎನ್.ಆರ್.ವೃತ್ತರವರ ಮಾಹಿತಿಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಆಡಳಿತ)ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ ಮತ್ತು ಘ.ತ್ಯಾ.ನಿ.) ರವರ ಮಾಹಿತಿಗಾಗಿ ಸಲ್ಲಿಸಿದೆ.
4. ಮಾನ್ಯ ಉಪ ಆಯುಕ್ತರು (ಆಡಳಿತ)ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ದಕ್ಷಿಣ)ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ದಕ್ಷಿಣ)ರವರ ಮಾಹಿತಿಗಾಗಿ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಅಧ್ಯಕ್ಷರ ಮಾಹಿತಿಗಾಗಿ ಕಳುಹಿಸಿದೆ.
8. ವಾರ್ಡ್ ಸಮಿತಿಯ ಸದಸ್ಯರ ಮಾಹಿತಿಗಾಗಿ ಕಳುಹಿಸಿದೆ.
9. ಕಛೇರಿ ಪ್ರತಿ.